**ಕರ್ನಾಟಕ ವಿಧಾನಸಭೆ**
**ಹದಿನೈದನೇ ವಿಧಾನಸಭೆ**
**ಹನ್ನೆರಡನೇ ಅಧಿವೇಶನ**

# ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ, 2022

**(2022ರ ವಿಧಾನಸಭೆಯ ವಿಧೇಯಕ ಸಂಖ್ಯೆ–08)**

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ, 1966ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ, 1966ನ್ನು (1966ರ ಕರ್ನಾಟಕ ಅಧಿನಿಯಮ ಸಂಖ್ಯೆ 18) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2022 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 30ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ, 1966ರ (1966ರ ಕರ್ನಾಟಕ ಅಧಿನಿಯಮ ಸಂಖ್ಯೆ 18) 30ನೇ ಪ್ರಕರಣದ ಬದಲಿಗೆ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

**"30. 2013ರ ಕೇಂದ್ರ ಅಧಿನಿಯಮ 30ರ ಅನ್ವಯ.-** ಭೂ ಸ್ವಾಧೀನ, ಪುನರ್ ವಸತಿ ಮತ್ತು ಪುನರ್ ವ್ಯವಸ್ಥೆಯಲ್ಲಿ ನ್ಯಾಯೋಚಿತ ಪರಿಹಾರ ಮತ್ತು ಪಾರದರ್ಶಕತೆಯ ಹಕ್ಕು ಅಧಿನಿಯಮ, 2013ರ (2013ರ ಕೇಂದ್ರ ಅಧಿನಿಯಮ 30) 23,23ಎ, 26, 27, 28, 29, 30, 64, 65, 69, 72, 73, 74, 75, 76, 77, 78, 79, 80, 96ನೇ ಪ್ರಕರಣಗಳು ಮತ್ತು ಅನುಸೂಚಿ- 1, ಆ ಉದ್ದೇಶಕ್ಕಾಗಿ, ಈ ಅಧ್ಯಾಯದ ಅಡಿಯಲ್ಲಿ ಸ್ವಾದೀನಪಡಿಸಿಕೊಳ್ಳಲಾದ ಜಮೀನುಗಳ ಸಂಬಂಧದಲ್ಲಿ ಅವುಗಳನ್ನು ಅದರ ಭಾಗವಾಗಿ ಮರು ಅಧಿನಿಯಮಿತಗೊಳಿಸಲಾಗಿದ್ದರೆ ಹೇಗೋ ಹಾಗೆ ಅದೇ ರೀತಿಯಲ್ಲಿ ಈ ಅಧಿನಿಯಮದ ಭಾಗವಾಗಿರುತ್ತವೆ ಎಂದು ಭಾವಿಸತಕ್ಕದ್ದು."

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಭೂ ಸ್ವಾಧೀನಕ್ಕೆ ಸಂಬಂಧಿಸಿದಂತೆ ಭೂ ಸ್ವಾಧೀನ, ಪುನರ್ ವಸತಿ ಮತ್ತು ಪುನರ್ ವ್ಯವಸ್ಥೆಯಲ್ಲಿ ನ್ಯಾಯೋಚಿತ ಪರಿಹಾರ ಮತ್ತು ಪಾರದರ್ಶಕತೆಯ ಹಕ್ಕು ಅಧಿನಿಯಮ, 2013 (2013ರ ಕೇಂದ್ರ ಅಧಿನಿಯಮ 30)ರ ಉಪಬಂಧಗಳ ಅನ್ವಯಕ್ಕಾಗಿ ಉಪಬಂಧ ಕಲ್ಪಿಸಲು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ, 1966 (1966ರ ಕರ್ನಾಟಕ ಅಧಿನಿಯಮ 18)ನ್ನು ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ

ಆದ್ದರಿಂದ ಈ ವಿಧೇಯಕ.

# ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಮುರುಗೇಶ್ ಆರ್. ನಿರಾಣಿ**
ಬೃಹತ್ ಕೈಗಾರಿಕೆಗಳ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ, 1966ರ

## (1966ರ ಕರ್ನಾಟಕ ಅಧಿನಿಯಮ ಸಂಖ್ಯೆ 18) ಉದ್ಧೃತ ಭಾಗ

**xx xx xx**

**30. 1894ರ ಕೇಂದ್ರಾಧಿನಿಯಮ 1 ರ ಅನ್ವಯ.-** ಭೂ ಸ್ವಾಧೀನ ಅಧಿನಿಯಮ, 1894ರ (1894ರ ಕೇಂದ್ರಾಧಿನಿಯಮ 1) ಉಪಬಂಧಗಳು, ಈ ಅಧ್ಯಾಯದ ಅಡಿಯಲ್ಲಿ ಸ್ವಾಧೀನಪಡಿಕೊಳ್ಳಲಾದ ಭೂಮಿಗಳ ಸಂಬಂಧದಲ್ಲಿ ಜಿಲ್ಲಾಧಿಕಾರಿಯು ಮಾಡಿದ ವಿಚಾರಣೆ ಮತ್ತು ನೀಡಿದ ಐತೀರ್ಪು ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖ, ನಷ್ಟ ಪರಿಹಾರದ ಹಂಚುವಿಕೆ ಮತ್ತು ನಷ್ಟ ಪರಿಹಾರದ ಸಂದಾಯ, ಇವುಗಳ ಸಂಬಂಧದಲ್ಲಿ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯವಾಗತಕ್ಕದ್ದು.

xx xx xx

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಪಿ7, ಕಾಸೂ , ಪ್ರತಿಗಳು 500, 15ನೇ ಮಾರ್ಚ್ 2022

**KARNATAKA LEGISLATIVE ASSEMBLY**
**FIFTEENTH LEGISLATIVE ASSEMBLY**
**TWELFTH SESSION**

# THE KARNATAKA INDUSTRIAL AREAS DEVELOPMENT (AMENDMENT) BILL, 2022

**(LA Bill No. 08 of 2022)**

A Bill further to amend the Karnataka Industrial Areas Development Act, 1966.

Whereas it is expedient to amend the Karnataka Industrial Areas Development Act, 1966 (Karnataka Act 18 of 1966) for the purposes hereinafter appearing;

Be it enacted by the Karnataka State Legislature in the seventy third year of the Republic of India, as follows:-

**1. Short title and commencement.-** (1) This Act may be called the Karnataka Industrial Areas Development (Amendment) Act, 2022.

(2) It shall come into force at once.

**2. Amendment of section 30.-** In the Karnataka Industrial Areas Development Act, 1966 (Karnataka Act 18 of 1966), for section 30, the following shall be substituted, namely:-

"**30. Application of Central Act 30 of 2013.-** The sections 23, 23A, 26, 27, 28, 29, 30, 64, 65, 69, 72, 73, 74, 75, 76, 77, 78, 79, 80, 96 and schedule -1 of the Right to fair compensation and transparency in Land Acquisition, rehabilitation and resettlement Act, 2013 (Central Act 30 of 2013) shall for that purpose be deemed to form part of this Act in the same manner as if they were re-enacted in the body thereof in respect of lands acquired under this Chapter."